ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂ: ಡಿಸಿಇ/ಟಿಆರ್‌ಎನ್/1/2022-ಟಿಡಿಜಿ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ: 23.12.2022.

## ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಬೋಧಕರ ವರ್ಗಾವಣೆ ಕೌನ್ಸಿಲಿಂಗ್ ನಡೆಸುವ ಬಗ್ಗೆ .

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 295 ಡಿಸಿಇ 2022 (ಇ ಕಡತ) ದಿನಾಂಕ:24-11-2022.

2. ಈ ಕಛೇರಿ ಸಮಸಂಖ್ಯೆಯ ಅಧಿಸೂಚನೆ ದಿ: 05.12.2022, ದಿ: 07.12.2022, ದಿ:14.12.2022 ಮತ್ತು ದಿ:20.12.2022.

** ** **

ಪ್ರಸಕ್ತ ಶೈಕ್ಷಣಿಕ ಸಾಲಿಗೆ ಅನ್ವಯಿಸುವಂತೆ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆಯನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು ಹಾಗೂ ತಿದ್ದುಪಡಿ ನಿಯಮಗಳು 2021ರಲ್ಲಿ ತಿಳಿಸಿರುವ ಮಾರ್ಗಸೂಚಿಗಳನ್ನು ಅನುಸರಿಸಿ ಪಾರದರ್ಶಕವಾಗಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಡಿಸೆಂಬರ್ – 2022 ರ ಮಾಹೆಯಲ್ಲಿ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲು ಉಲ್ಲೇಖ (2)ರ ದಿನಾಂಕ:05.12.2022ರಂತೆ ಅಧಿಸೂಚನೆಯನ್ನು ಹೊರಡಿಸಿ, ತಾತ್ಕಾಲಿಕ ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿತ್ತು. ವೈದ್ಯಕೀಯ ಪ್ರಕರಣಗಳ ಪರಿಶೀಲನೆಯ ವಿಳಂಬದಿಂದಾಗಿ ವರ್ಗಾವಣಾ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ.

**ವರ್ಗಾವಣೆ ಕೌನ್ಸಿಲಿಂಗ್‌ನ ಪರಿಷ್ಕೃತ ವೇಳಾಪಟ್ಟಿ:**

| ಕ್ರ. ಸಂ. | ವಿವರ | ದಿನಾಂಕ: |
|---|---|---|
| 1 | **ವಿಶೇಷ ಪ್ರಕರಣಗಳ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಅಂತಿಮ ವರ್ಗಾವಣೆ ಆದ್ಯತಾ ಪಟ್ಟಿ ಪ್ರಕಟಣೆ** | **24-12-2022** |
| 2 | **ವಿಶೇಷ ಪ್ರಕರಣಗಳ 1st Round ಕೌನ್ಸಿಲಿಂಗ್** (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | **26-12-2022** |
| 3 | **ವಿಶೇಷ ಪ್ರಕರಣಗಳ 2nd Round ಕೌನ್ಸಿಲಿಂಗ್** (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | **27-12-2022** |
| 4 | **ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಕೌನ್ಸಿಲಿಂಗ್** (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ನಂತರ ಪ್ರಕಟಿಸಲಾಗುವುದು) | **28-12-2022 & 29-12-2022** |

**ವರ್ಗಾವಣೆಗೆ ಸಂಬಂಧಿಸಿದಂತೆ ಮಾಹಿತಿಗಳನ್ನು ಕಾಲಕಾಲಕ್ಕೆ ಇಲಾಖಾ ವೆಬ್‌ಸೈಟ್‌ನ ಬೋಧಕರ ವರ್ಗಾವಣೆ – 2022 (December) Web page ನಲ್ಲಿ ಪ್ರಕಟಿಸಲಾಗುವುದು. ಸಂಬಂಧಿಸಿದವರು ಇಲಾಖಾ ವೆಬ್ ಸೈಟ್ ಅನ್ನು ಗಮನಿಸುವುದು.**

**(ಮಾನ್ಯ ಆಯುಕ್ತರ ಆದೇಶದನ್ವಯ)**

23/12/2022

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಪ್ರತಿಯನ್ನು:**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.

*Transfer December 2022 Notification Draft*

Scanned with CamScanner